ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಬೆಂಗಳೂರು
ಆರೋಗ್ಯ ಸೌಧ, ಮಹಡಿ, ಮಾಗಡಿರಸ್ತೆ, ಬೆಂಗಳೂರು-560023

ಸಂಖ್ಯೆ: ಎನ್‌ಹೆಚ್‌ಎಂ/ಡಿಡಿ/ಐಎಂಎಂ/22/2021-22 ದಿನಾಂಕ: 26.05.2021

ಇವರಿಗೆ,

ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ.
ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು, ಜಿಲ್ಲಾಡಳಿತ ಕಛೇರಿ.

ಮಾನ್ಯರೆ,

ವಿಷಯ ಜಿಲ್ಲೆಗಳಲ್ಲಿ ಆದ್ಯತೆ ಮೇರೆಗೆ ಹಾಲುಣಿಸುವ ತಾಯಂದಿರಿಗೆ ಕೋವಿಡ್ ಲಸಿಕಾಕರಣ ನಡೆಸುವ ಕುರಿತು.

ಉಲ್ಲೇಖ:
1. ಭಾರತ ಸರ್ಕಾರದ ಆರೋಗ್ಯ ಮತ್ತು ಕು ಕ ಮಂತ್ರಾಲಯದ ಪತ್ರ ಸಂಖ್ಯೆ: D.O.No 1940407/2020/Imm ದಿನಾಂಕ: 19.05.2021
1. ದಿನಾಂಕ 21.05.2021 ಮತ್ತು 22.05.2021 ರಂದು ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ಶಿಫಾರಸ್ಸಿನಂತೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ 19.05.2021 ರ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯದ ಇತ್ತೀಚಿನ ಶಿಫಾರಸ್ಸಿನಂತೆ ಹಾಲುಣಿಸುವ ತಾಯಂದಿರಿಗೆ ಲಸಿಕೆ ನೀಡಬಹುದೆಂದು ಸೂಚಿಸಿರುತ್ತಾರೆ ಮತ್ತು ದಿನಾಂಕ 21.05.2021 ಮತ್ತು 22.05.2021 ರಂದು ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿ ರಾಜ್ಯದಲ್ಲಿ ಹಾಲುಣಿಸುವ ತಾಯಂದಿರಿಗೆ ಆದ್ಯತೆ ಮೇರೆಗೆ ಕೋವಿಡ್ ಲಸಿಕಾಕರಣ ನಡೆಸಲು ಶಿಫಾರಸ್ಸು ಮಾಡಿದ್ದು ಇದರಿಂದ ತಾಯಂದಿರ ಮೂಲಕ ಮಕ್ಕಳಿಗೂ ಸಹ ರೋಗನಿರೋಧಕ ಶಕ್ತಿ ಹೆಚ್ಚುವುದಲ್ಲದೆ ರಾಜ್ಯದಲ್ಲಿ ಕರೋನಾ ಸೋಂಕಿನ ಮೂರನೇ ಅಲೆಯಲ್ಲಿ ತಾಂತ್ರಿಕ ಸಲಹಾ ಸಮಿತಿಯ ತಜ್ಞರು ಈಗಾಗಲೆ ಮುನ್ಸೂಚನೆ ನೀಡಿರುವಂತೆ ಸಣ್ಣ ವಯಸ್ಸಿನ ಮಕ್ಕಳು ಇದರಿಂದ ಭಾಧಿತರಾಗುವ ಸಾಧ್ಯತೆಗಳು ಹೆಚ್ಚಾಗಿರುತ್ತದೆ. ಆದ್ದರಿಂದ ಈ ಕೆಳಕಂಡ ಗುಂಪಿನ ಹಾಲುಣಿಸುವ ತಾಯಂದಿರಿಗೆ ಆದ್ಯತೆ ಮೇರೆಗೆ ಕೋವಿಡ್ ಲಸಿಕಾಕರಣ ನಡೆಸಲು ತಿಳಿಸಲಾಗಿದೆ.

- ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯವು ಗುರುತಿಸಿರುವ ಆರೋಗ್ಯ ಕಾರ್ಯಕರ್ತರು ಮತ್ತು ಮುಂಚೂಣಿ ಕಾರ್ಯಕರ್ತರುಗಳ ಗುಂಪಿನಲ್ಲಿ ಹಾಲುಣಿಸುವ ತಾಯಂದಿರು ಇನ್ನೂ ಲಸಿಕೆ ಪಡೆಯದಿದ್ದಲ್ಲಿ ಅವರುಗಳಿಗೆ ಕೂಡಲೆ ಕೋವಿಡ್ ಲಸಿಕೆ ನೀಡುವುದು.
- 45 ವರ್ಷ ಮೇಲ್ಪಟ್ಟ ಹಾಲುಣಿಸುವ ತಾಯಂದಿರು ಯಾರಾದರು ಇದ್ದಲ್ಲಿ ಅವರಿಗೂ ಭಾರತ ಸರ್ಕಾರದಿಂದ ಸರಬರಾಜಾದ ಲಸಿಕೆಗಳನ್ನು ಬಳಸಿ ಆದ್ಯತೆ ಮೇರೆಗೆ ಕೋವಿಡ್ ಲಸಿಕೆ ನೀಡುವುದು.
- 18 ರಿಂದ 44 ವರ್ಷದ ವಯೋಮಾನದಲ್ಲಿನ ರಾಜ್ಯ ಗುರುತಿಸಿದ ಮುಂಚೂಣಿ ಕಾರ್ಯಕರ್ತರು ಮತ್ತು ಆದ್ಯತೆ ಗುಂಪುಗಳಲ್ಲಿನ ಹಾಲುಣಿಸುವ ತಾಯಂದಿರಿಗೆ ಆದ್ಯತೆ ಮೇರೆಗೆ ರಾಜ್ಯ ಸರ್ಕಾರದಿಂದ ಖರೀದಿಸಲಾದ ಲಸಿಕೆಗಳನ್ನು ಬಳಸಿ ಕೋವಿಡ್ ಲಸಿಕೆ ನೀಡಲು ಕ್ರಮ ವಹಿಸುವುದು.

ಅರುಂಧತಿ

ಅಭಿಯಾನ ನಿರ್ದೇಶಕರು
ರಾಷ್ಟ್ರೀಯ ಆರೋಗ್ಯ ಅಭಿಯಾನ
ಬೆಂಗಳೂರು

ಸೂಕ್ತ ಕ್ರಮಕ್ಕಾಗಿ:

1. ಎಲ್ಲಾ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.

2. ಮುಖ್ಯ ಆರೋಗ್ಯಾಧಿಕಾರಿಗಳು (ಸಾರ್ವಜನಿಕ ಆರೋಗ್ಯ), ಬಿಬಿಎಂಪಿ.
3. ಎಲ್ಲಾ ಜಿಲ್ಲೆಯ ಆರ್.ಸಿ.ಹೆಚ್ ಅಧಿಕಾರಿಗಳು.
4. ಲಸಿಕಾಧಿಕಾರಿಗಳು (ಬಿ.ಬಿ.ಎಂ.ಪಿ).

**ಮಾಹಿತಿಗಾಗಿ:**

1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ.
2. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
4. ವಿಶೇಷ ಆಯುಕ್ತರು (ಆರೋಗ್ಯ), ಬಿಬಿಎಂಪಿ.
5. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಛೇರಿ.
6. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
7. ಅಪರ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
8. ಯೋಜನಾ ನಿರ್ದೇಶಕರು (ಆರ್.ಸಿ.ಹೆಚ್), ಆರೋಗ್ಯ ಮತ್ತುಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
9. ಉಪ ನಿರ್ದೇಶಕರು (ಲಸಿಕೆ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
10. ಉಪ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
11. ಕಛೇರಿ ಪ್ರತಿ